## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಚಿಕ್ಕಬಳ್ಳಾಪುರ ಜಿಲ್ಲೆ, ಚಿಂತಾಮಣಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆ (ಪ-1)ಯನ್ನು ಅನುಮೋದಿಸುವ ಬಗ್ಗೆ.

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ:ನಅಇ 127 ಬೆಂರೂಪ್ರಾ 2014, ದಿ:18.11.2014

2) ಸದಸ್ಯ ಕಾರ್ಯದರ್ಶಿ, ಚಿಂತಾಮಣಿ ಯೋಜನಾ ಪ್ರಾಧಿಕಾರ ಇವರ ಪತ್ರ ಸಂಖ್ಯೆ: ಚಿಂಯೋಪ್ರಾ / ಮಾಯೋಪ್ರಾ / 01/ 2015-16 /82, ದಿನಾಂಕ:24.11.2015.

3) ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಏಕ ಕಡತ ಸಂಖ್ಯೆ:ನಗ್ರಾಯೋ(28/ಬೆಂವಿ/ಚಿ.ಮಯೋ(ಪ-1)/2015-16ರಲ್ಲಿ ನೀಡಿರುವ ಅಭಿಪ್ರಾಯ ದಿನಾಂಕ:11.02.2016.

****

ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿ ಬೆಂಗಳೂರು
293
1/7/16

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ: (1)ರ ಸರ್ಕಾರಿ ಆದೇಶದಲ್ಲಿ ಚಿಂತಾಮಣಿ ಪಟ್ಟಣ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಗೆ ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2)ರ ಪತ್ರದಲ್ಲಿ ಸದಸ್ಯ ಕಾರ್ಯದರ್ಶಿ, ಚಿಂತಾಮಣಿ ಯೋಜನಾ ಪ್ರಾಧಿಕಾರ, ಇವರು ಚಿಂತಾಮಣಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾಯೋಜನೆ ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(1)(2)ರನ್ವಯ ಅಗತ್ಯ ಕ್ರಮ ಜರುಗಿಸಿ ಮಹಾಯೋಜನೆಯ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ ಸರ್ಕಾರದ ಅಂತಿಮ ಅನುಮೋದನೆ ಪಡೆಯಲು ಕೋರಿ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯವರಿಗೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (3)ರಲ್ಲಿ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿಯ ಏಕ ಕಡತದಲ್ಲಿ ಚಿಂತಾಮಣಿ ಪಟ್ಟಣದ ಜನಸಂಖ್ಯೆಯು 2011ರ ಜನಗಣತಿಯಂತೆ 76,068 ಇದ್ದು ಮುಂದಿನ ಯೋಜನಾ ಅವಧಿ, 2031ರ ವೇಳೆಗೆ 1,35,000 ಆಗಬಹುದೆಂದು ಅಂದಾಜಿಸಿ ಮಹಾ ಯೋಜನೆಯನ್ನು ತಯಾರಿಸಲಾಗಿದೆ. ಚಿಂತಾಮಣಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಒಟ್ಟು 1697.55 ಹೆಕ್ಟೇರ್ ಪ್ರದೇಶದ ಪೈಕಿ ನಗರದ ಅಭಿವೃದ್ಧಿಗಾಗಿ 1312.09 ಹೆಕ್ಟೇರ್ ಪ್ರದೇಶವನ್ನು ನಗರೀಕರಣದ ಎಲ್ಲೆಯೆಂದು ಪ್ರಸ್ತಾಪಿಸಿ ಮಹಾಯೋಜನೆಯನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ (12)ರಲ್ಲಿ ನಿಗದಿಪಡಿಸಿರುವ ಅಂಶಗಳನ್ನು ಪರಿಗಣಿಸಿ ನಗರಗಳ ಮುಂದಿನ ಯೋಜಿತ ಬೆಳವಣಿಗೆಗಾಗಿ ವಿವಿಧ ಭೂ ಉಪಯೋಗಗಳಿಗಾಗಿ ಈ ಕೆಳಗಿನಂತೆ ವಿಸ್ತೀರ್ಣವನ್ನು ಪ್ರಸ್ತಾಪಿಸಲಾಗಿದೆ.

ಪಟ್ಟಣಗಳ ಯೋಜಿತ ಬೆಳವಣಿಗೆಗಾಗಿ ಒಟ್ಟು 1312.09 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 732.17 ಹೆಕ್ಟೇರ್ (ಶೇ.55.80), ವಾಣಿಜ್ಯಕ್ಕಾಗಿ 47.71 ಹೆಕ್ಟೇರ್ (ಶೇ.3.64), ಕೈಗಾರಿಕೆಗಾಗಿ 101.90 ಹೆಕ್ಟೇರ್ (ಶೇ.7.77), ಸಾರ್ವಜನಿಕ ಅರೆ ಸಾರ್ವಜನಿಕ ಉಪಯೋಗಕ್ಕೆ 41.88 ಹೆಕ್ಟೇರ್ (ಶೇ.3.19) ಉದ್ಯಾನವನ



ಆಪ್ತ ಶಾಖೆ
1/7/16

ಮತ್ತು ಬಯಲು ಜಾಗಕ್ಕಾಗಿ 143.10ಹೆಕ್ಟೇರ್ (ಶೇ.10.91) ಸಾರ್ವಜನಿಕ ಉಪಯುಕ್ತತೆಗಾಗಿ 7.10 ಹೆಕ್ಟೇರ್ (ಶೇ.0.54) ಹಾಗೂ ಸಾರಿಗೆ /ಸಂಪರ್ಕ ವಲಯಕ್ಕೆ 238.23 ಹೆಕ್ಟೇರ್ (ಶೇಕಡ 18.15), ಪ್ರದೇಶವನ್ನು ನಿಗಧಿಪಡಿಸಲಾಗಿದೆ. ಮಹಾ ಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3)ರನ್ವಯ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 47 ಬೆಂರೂಪ್ರಾ 2016, ಬೆಂಗಳೂರು, ದಿನಾಂಕ: 27.06.2016**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆ, ಚಿಂತಾಮಣಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾಯೋಜನೆ (ಪ–1) 2031ಕ್ಕೆ ಈ ಕೆಳಕಂಡ ಷರತ್ತಿಗೊಳಪಟ್ಟು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಪ್ರಕರಣ 13(3)ರನ್ವಯ ಸರ್ಕಾರದ ಅಂತಿಮ ಅನುಮೋದನೆಯನ್ನು ನೀಡಲಾಗಿದೆ. ಮಹಾಯೋಜನೆ (ಪ–1) 2031ಕ್ಕೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

**ಷರತ್ತು:**

ವಲಯ ನಿಯಮಾವಳಿಯ ಪುಟ ಸಂಖ್ಯೆ:144 ಕ್ರಮ ಸಂಖ್ಯೆ: (1.24.1.b.xiii) ರಲ್ಲಿ ಸರ್ಕಾರದ ಅಧಿಸೂಚನೆ ದಿನಾಂಕ:14.09.2015ರ ಬದಲಾಗಿ 14.09.2012 ಎಂದು ಪರಿಗಣಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ನಾಗರಾಜ)**
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ.

**ಇವರಿಗೆ:**

ಸಂಕಲನಾಕಾರರು, ಕರ್ನಾಟಕ ರಾಜ್ಯ ಪತ್ರ, ಪ್ರಕಟಣೆಗಾಗಿ ಹಾಗೂ ಪ್ರಕಟಿಸಿದ 100 ಪ್ರತಿಗಳನ್ನು ನಗರಾಭಿವೃದ್ಧಿ ಇಲಾಖೆಗೆ ಕಳುಹಿಸಲು ಕೋರಲಾಗಿದೆ.

ಪ್ರತಿಯನ್ನು:

1) ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಕಳುಹಿಸಿದೆ.
2) ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ.
3) ಸದಸ್ಯ–ಕಾರ್ಯದರ್ಶಿ, ಚಿಂತಾಮಣಿ ಯೋಜನಾ ಪ್ರಾಧಿಕಾರ, ಚಿಂತಾಮಣಿ
4) ಪೌರಾಯುಕ್ತರು, ನಗರಸಭೆ, ಚಿಂತಾಮಣಿ.
5) ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು, ಚಿಕ್ಕಬಳ್ಳಾಪುರ.
6) ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.